# ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಹೊಸಪೇಟೆ

ಪಿ.ಬಿ. ನಂ.17, ಹೊಸಪೇಟೆ-583201.

ದೂರವಾಣಿ ಸಂಖ್ಯೆ: 91872 35482

E-mail: ceo@bellarydcc.bank.in - Web-Site: www.bellarydcc.bank.in

ಸಂಖ್ಯೆ: ಆಶಿವಿ/ಸಿಬ್ಬಂದಿ/ನೇಮಕಾತಿ/ **12** /2026-27 ದಿನಾಂಕ: 06.04.2026

## : ನೇಮಕಾತಿ ಪ್ರಕಟಣೆ :

ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಹೊಸಪೇಟೆ ಇದರಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ (Online) ಮುಖಾಂತರ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಖುದ್ದಾಗಿ ಕೋರಿಯರ್ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಕಳುಹಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ. ಕರ್ನಾಟಕ ಸರ್ಕಾರದ ಮಾನ್ಯ ಸಹಕಾರ ಸಂಘಗಳ ಅಪರ ನಿಬಂಧಕರ (ಪತ್ತು) ಇವರ ಆದೇಶ ಸಂಖ್ಯೆ:ಕ್ರಸಂ:ಆರ್.ಸಿ.ಎಸ್/ಸಿಆರ್‌ಡಿ/ಸಿಎಬಿ-5(ಡಿಸಿಸಿಬಿ)/3/2026,ಸಿ.ಆರ್.ಡಿ.1 ದಿನಾಂಕ 31.01.2026 ರನ್ವಯ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ಪಡೆಯಲಾಗಿದೆ. ನೇಮಕಾತಿ ಮಾಡಲು ಉದ್ದೇಶಿಸಿರುವ ವಿವಿಧ ವೃಂದದ ಒಟ್ಟು **82** ಹುದ್ದೆಗಳನ್ನು ಸರ್ಕಾರದ ಆದೇಶ ಸಂ:ಸಿಆಸುಇ01ಸೆಹಿಮ 2026, ಬೆಂಗಳೂರು ದಿನಾಂಕ 27.02.2026 ರನ್ವಯ ಈ ಕೆಳಕಂಡಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ.

## (1) (ಅ) ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು – 22 ಹುದ್ದೆಗಳು.

ವೇತನ ಶ್ರೇಣಿ : ರೂ.44425-1125-47800-1250-52800-1375-58300-1500-64300-1650-74200-1900-83700.

### ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮೀಸಲಾತಿ 371 (ಜೆ):

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು | 18 | ಸಾಮಾನ್ಯ | 9 | 2 | 3 | 3 | - | - | - | 1 |
| | | | ಪ.ಜಾ. | 2 | - | 1 | 1 | - | - | - | - |
| | | | ಪ.ಪಂಗಡ | 1 | 1 | - | - | - | - | - | - |
| | | | ಪ್ರವರ್ಗ- 1 | 1 | 1 | - | - | - | - | - | - |
| | | | ಪ್ರವರ್ಗ-2ಎ | 2 | 1 | 1 | - | - | - | - | - |
| | | | ಪ್ರವರ್ಗ-2ಬಿ | 1 | 1 | - | - | - | - | - | - |
| | | | ಪ್ರವರ್ಗ-3ಎ | 1 | 1 | - | - | - | - | - | - |
| | | | ಪ್ರವರ್ಗ-3ಬಿ | 1 | 1 | - | - | - | - | - | - |
| | | | ಒಟ್ಟು | 18 | 8 | 5 | 4 | - | - | - | 1 |

### ಕಲ್ಯಾಣ ಕರ್ನಾಟಕ ಸ್ಥಳೀಯೇತರ ವೃಂದ ಮೀಸಲಾತಿ :

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು | 4 | ಸಾಮಾನ್ಯ | 2 | 1 | 1 | - | - | - | - | - |
| | | | ಪ.ಜಾತಿ | 1 | 1 | - | | - | - | - | - |
| | | | ಪ.ಪಂಗಡ | 1 | 1 | - | - | - | - | - | - |
| | | | ಪ್ರವರ್ಗ- 1 | - | | - | - | - | - | - | - |
| | | | ಪ್ರವರ್ಗ-2ಎ | - | - | - | - | - | - | - | - |
| | | | ಪ್ರವರ್ಗ-2ಬಿ | - | - | - | - | - | - | - | - |
| | | | ಪ್ರವರ್ಗ-3ಎ | - | - | - | - | - | - | - | - |
| | | | ಪ್ರವರ್ಗ-3ಬಿ | - | - | - | - | - | - | - | - |
| | | | ಒಟ್ಟು | 4 | 3 | 1 | - | - | - | - | - |

For Bellary Dist.Central Co-Op Bank Ltd.,Hospet

Chief Executive Officer

## (ಅ) ದ್ವಿತೀಯ ದರ್ಜೆ ಸಹಾಯಕರು – **28** ಹುದ್ದೆಗಳು.

ವೇತನ ಶ್ರೇಣಿ : **ರೂ.34100-800-35700-900-39300-1000-43300-1125-47800-1250-52800-1375-58300-1500-64300-1650-67600.**

### ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮೀಸಲಾತಿ 371 (ಜೆ):

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ ಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ದ್ವಿತೀಯ ದರ್ಜೆ ಸಹಾಯ ಕರು | 22 | ಸಾಮಾನ್ಯ | 11 | 2 | 3 | 3 | 1 | 1 | 1 | - |
| | | | ಪ.ಜಾತಿ | 3 | - | 2 | 1 | - | - | - | - |
| | | | ಪ.ಪಂಗಡ | 1 | - | - | 1 | - | - | - | - |
| | | | ಪ್ರವರ್ಗ– 1 | 1 | - | - | - | - | - | - | 1 |
| | | | ಪ್ರವರ್ಗ–2ಎ | 3 | - | 2 | 1 | - | - | - | - |
| | | | ಪ್ರವರ್ಗ–2ಬಿ | 1 | - | - | - | - | - | - | 1 |
| | | | ಪ್ರವರ್ಗ–3ಎ | 1 | - | - | 1 | - | - | - | - |
| | | | ಪ್ರವರ್ಗ–3ಬಿ | 1 | - | - | - | - | - | - | 1 |
| | | | ಒಟ್ಟು | 22 | 2 | 7 | 7 | 1 | 1 | 1 | 3 |

### ಕಲ್ಯಾಣ ಕರ್ನಾಟಕ ಸ್ಥಳೀಯೇತರ ವೃಂದ ಮೀಸಲಾತಿ :

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ ಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ದ್ವಿತೀಯ ದರ್ಜೆ ಸಹಾಯ ಕರು | 6 | ಸಾಮಾನ್ಯ | 3 | - | 1 | 1 | 1 | - | - | - |
| | | | ಪ.ಜಾತಿ | - | - | - | | - | - | - | - |
| | | | ಪ.ಪಂಗಡ | - | - | - | - | - | - | - | - |
| | | | ಪ್ರವರ್ಗ– 1 | - | - | - | - | - | - | - | - |
| | | | ಪ್ರವರ್ಗ–2ಎ | 1 | - | - | 1 | - | - | - | - |
| | | | ಪ್ರವರ್ಗ–2ಬಿ | - | - | - | - | - | - | - | - |
| | | | ಪ್ರವರ್ಗ–3ಎ | 1 | 1 | - | - | - | - | - | - |
| | | | ಪ್ರವರ್ಗ–3ಬಿ | 1 | 1 | - | - | - | - | - | - |
| | | | ಒಟ್ಟು | 6 | 2 | 1 | 2 | 1 | - | - | - |

## (ಇ) ವಾಹನ ಚಾಲಕರು – 1 : ಹುದ್ದೆ

ವೇತನ ಶ್ರೇಣಿ : **ರೂ.31775-725-32500-800-35700-900-39300-1000-43300-1125-47800-1250-52800-1375-58300-1500-61300**

### ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮೀಸಲಾತಿ 371 (ಜೆ).

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ ಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ವಾಹನ ಚಾಲಕ | 1 | ಸಾಮಾನ್ಯ | 1 | 1 | - | - | - | - | - | - |
| | | | ಪ.ಜಾತಿ | - | - | - | | - | - | - | - |
| | | | ಪ.ಪಂಗಡ | - | - | - | - | - | - | - | - |
| | | | ಪ್ರವರ್ಗ– 1 | - | - | - | - | - | - | - | - |
| | | | ಪ್ರವರ್ಗ–2ಎ | - | - | - | - | - | - | - | - |
| | | | ಪ್ರವರ್ಗ–2ಬಿ | - | - | - | - | - | - | - | - |
| | | | ಪ್ರವರ್ಗ–3ಎ | - | - | - | - | - | - | - | - |
| | | | ಪ್ರವರ್ಗ–3ಬಿ | - | - | - | - | - | - | - | - |
| | | | ಒಟ್ಟು | 1 | 1 | - | - | - | - | - | - |



For Bellary Dist.Central Co-Op Bank Ltd.,

Chief Executive Officer

ಬಿ.ಡಿ.ಸಿ.ಸಿ. ಬ್ಯಾಂಕ್ ನಿ.ನಂ. 5398 ಹೊಸಪೇಟೆ

## (ಈ) ಕಿರಿಯ ಸೇವಕರು – 31 ಹುದ್ದೆಗಳು.

ವೇತನ ಶ್ರೇಣಿ ರೂ.29600-725-32500-800-35700-900-39300-1000-43300-1125-47800-1250-52800

**ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮೀಸಲಾತಿ 371 (ಜೆ) :**

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ಕಿರಿಯ ಸೇವಕರು | 26 | ಸಾಮಾನ್ಯ | 13 | 3 | 4 | 3 | 2 | - | - | 1 |
| | | | ಪ.ಜಾತಿ | 4 | 1 | 1 | 1 | 1 | - | - | - |
| | | | ಪ.ಪಂಗಡ | 1 | - | 1 | - | - | - | - | - |
| | | | ಪ್ರವರ್ಗ– 1 | 1 | - | - | 1 | - | - | - | - |
| | | | ಪ್ರವರ್ಗ–2ಎ | 4 | 1 | 1 | 1 | 1 | - | - | - |
| | | | ಪ್ರವರ್ಗ–2ಬಿ | 1 | - | - | 1 | - | - | - | - |
| | | | ಪ್ರವರ್ಗ–3ಎ | 1 | - | 1 | - | - | - | - | - |
| | | | ಪ್ರವರ್ಗ–3ಬಿ | 1 | - | 1 | - | - | - | - | - |
| | | | ಒಟ್ಟು | 26 | 5 | 9 | 7 | 4 | - | - | 1 |

**ಕಲ್ಯಾಣ ಕರ್ನಾಟಕ ಸ್ಥಳೀಯೇತರ ವೃಂದ ಮೀಸಲಾತಿ :**

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆಗಳ ಸಂಖ್ಯೆ | ವರ್ಗಗಳ ವಿವರ | ಒಟ್ಟು | ಒಳ ಮೀಸಲಾತಿ | | | | | | |
|---|---|---|---|---|---|---|---|---|---|---|---|
| | | | | | ಸಾಮಾನ್ಯ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನ ನಿರಾಶ್ರಿತರು | ವಿಕಲ ಚೇತನರು |
| 1 | ಕಿರಿಯ ಸೇವಕರು | 5 | ಸಾಮಾನ್ಯ | 3 | - | 1 | 1 | - | - | - | 1 |
| | | | ಪ.ಜಾತಿ | 1 | - | 1 | | - | - | - | - |
| | | | ಪ.ಪಂಗಡ | - | - | - | - | - | - | - | - |
| | | | ಪ್ರವರ್ಗ– 1 | - | - | - | - | - | - | - | - |
| | | | ಪ್ರವರ್ಗ–2ಎ | - | - | - | - | - | - | | - |
| | | | ಪ್ರವರ್ಗ–2ಬಿ | 1 | 1 | - | - | - | - | | - |
| | | | ಪ್ರವರ್ಗ–3ಎ | - | - | - | - | - | - | - | - |
| | | | ಪ್ರವರ್ಗ–3ಬಿ | - | - | - | - | - | - | - | - |
| | | | ಒಟ್ಟು | 5 | 1 | 2 | 1 | - | - | - | 1 |

**2. ಶೈಕ್ಷಣಿಕ ವಿದ್ಯಾರ್ಹತೆ:** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಆಯಾ ಹುದ್ದೆಗಳ ಮುಂದೆ ಈ ಕೆಳಗಿನಂತೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.

| ಕ್ರಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ |
|---|---|---|
| 1 | ವ್ಯವಸ್ಥಾಪಕರು \ ಪ್ರಥಮ ದರ್ಜೆ ಸಹಾಯಕರು | 1) ಭಾರತದ ಕಾನೂನಿನನ್ವಯ ಸ್ಥಾಪನೆಯಾದ ವಿಶ್ವವಿದ್ಯಾಲಯದ ಯಾವುದೇ ಪದವಿಯಲ್ಲಿ ತೇರ್ಗಡೆಯಾಗಿರಬೇಕು.<br>2) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಕನ್ನಡವನ್ನು ಅರ್ಥ ಮಾಡಿಕೊಳ್ಳಬೇಕು.<br>3) ಕಂಪ್ಯೂಟರ್ ನಿರ್ವಹಣೆ ಬಗ್ಗೆ ಜ್ಞಾನ ಹೊಂದಿರತಕ್ಕದ್ದು. |
| 2 | ದ್ವಿತೀಯ ದರ್ಜೆ ಸಹಾಯಕರು | 1) ಮಾನ್ಯತೆ ಪಡೆದ ಪದವಿ ಪೂರ್ವ ವಿದ್ಯಾಲಯದಿಂದ ದ್ವಿತೀಯ ಪಿ.ಯು.ಸಿ. **ಅಥವಾ** ತತ್ಸಮಾನ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರಬೇಕು.<br>2) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಕನ್ನಡವನ್ನು ಅರ್ಥ ಮಾಡಿಕೊಳ್ಳಬೇಕು.<br>3) ಕಂಪ್ಯೂಟರ್ ನಿರ್ವಹಣೆ ಬಗ್ಗೆ ಜ್ಞಾನ ಹೊಂದಿರತಕ್ಕದ್ದು. |
| 3 | ವಾಹನ ಚಾಲಕರು | 1) ಎಸ್.ಎಸ್.ಎಲ್.ಸಿ. ಯಲ್ಲಿ ಉತ್ತೀರ್ಣರಾಗಿದ್ದು, ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.<br>2) ಕಾನೂನುಬದ್ಧ ಡ್ರೈವಿಂಗ್ ಲೈಸೆನ್ಸ್ ಹೊಂದಿರಬೇಕು. |
| 4 | ಕಿರಿಯ ಸೇವಕರು | ಎಸ್.ಎಸ್.ಎಲ್.ಸಿ. ಯಲ್ಲಿ ಉತ್ತೀರ್ಣರಾಗಿದ್ದು. ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು. |

For Bellary Dist.Central Co-Op Bank Ltd.,Hospet

Chief Executive Officer

- ಮಹಿಳೆ / ಗ್ರಾಮೀಣ / ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.
- 371 (ಜೆ) ಮೀಸಲಾತಿ – ಕಲ್ಯಾಣ ಕರ್ನಾಟಕ ವೃಂದದಲ್ಲಿ ಮೀಸಲಿರಿಸಿದ ಹುದ್ದೆಗಳು. ಸ್ಥಳೀಯೇತರ ವೃಂದ ಅಂದರೆ ರಾಜ್ಯಮಟ್ಟದ ಉಳಿಕೆ ವೃಂದ {371(ಜೆ) ಹೊರತುಪಡಿಸಿ}

## 3. ವಯೋಮಿತಿ:

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಈ ಕೆಳಗೆ ತಿಳಿಸಿರುವಂತೆ ಕನಿಷ್ಠ **18** ವರ್ಷ ವಯೋಮಿತಿಯನ್ನು ಹೊಂದಿರಬೇಕು. ಹಾಗೂ ಈ ಕೆಳಕಂಡ ಗರಿಷ್ಠ ವಯೋ ಮಿತಿಯನ್ನು ಮೀರಿರಬಾರದು.

| | |
|---|---|
| 1 | ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಅಥವಾ ಹಿಂದುಳಿದ ವರ್ಗಗಳ ಪ್ರವರ್ಗ–1 ಕ್ಕೆ ಸೇರಿರುವ ಅಭ್ಯರ್ಥಿಗಳಿಗೆ **40** ವರ್ಷ ವಯೋಮಿತಿ ಮೀರಿರಬಾರದು. |
| 2 | ಇತರೆ ಹಿಂದುಳಿದ ವರ್ಗಕ್ಕೆ ಸೇರಿರುವ ಅಭ್ಯರ್ಥಿಗಳಿಗೆ **38** ವರ್ಷ ವಯೋಮಿತಿ ಮೀರಿರಬಾರದು. (ಇತರೆ ಹಿಂದುಳಿದ ವರ್ಗ ಎಂದರೆ, 2ಎ, 2ಬಿ, 3ಎ ಮತ್ತು 3ಬಿ ವರ್ಗದವರು). |
| 3 | ಇತರೆ ಅಭ್ಯರ್ಥಿಗಳಿಗೆ **35** ವರ್ಷ ವಯೋಮಿತಿ ಮೀರಿರಬಾರದು. |

**ಈ ಮೇಲ್ಕಂಡ ವಯೋಮಿತಿಗೆ ಹೆಚ್ಚುವರಿಯಾಗಿ ಈ ಕೆಳಕಂಡಂತೆ ವಯೋಮಿತಿ ಸಡಲಿಕೆ ಇರುತ್ತದೆ.**

ಎ) ಮಾಜಿ ಸೈನಿಕ ಅಭ್ಯರ್ಥಿಗೆ ಸರ್ಕಾರದ ಆದೇಶಾನುಸಾರ ಸೇನೆಯಲ್ಲಿ ಸೇವೆ ಸಲ್ಲಿಸಿದ ಸೇವಾ ಅವಧಿಗೆ.

ಬಿ) ವಿಕಲ ಚೇತನ ಅಭ್ಯರ್ಥಿಗಳಿಗೆ 10 (ಹತ್ತು) ವರ್ಷ.

ಸಿ) ವಿಧವೆ ಮಹಿಳಾ ಅಭ್ಯರ್ಥಿಗೆ 10 (ಹತ್ತು) ವರ್ಷ. {ತಾನು ವಿಧವೆ ಎಂದು ಮರು ಮದುವೆಯಾಗಿಲ್ಲವೆಂದು ತಹಶೀಲ್ದಾರ್ ಇವರಿಂದ ಪಡೆದ ಪ್ರಮಾಣ ಪತ್ರ ಅಪ್‌ಲೋಡ್ ಮಾಡುವುದು.}

**ವಿಶೇಷ ಸೂಚನೆ :**

**ಸರ್ಕಾರದ ಅಧಿಸೂಚನೆ ಆದೇಶ ಸಂಖ್ಯೆ: ಸಿ.ಆ.ಸು.ಇ:2062:ಸೇನೆನಿ 2025 ಬೆಂಗಳೂರು ದಿನಾಂಕ 29.01.2026 ರನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ** (As a One Time Measures) **5 ವರ್ಷಗಳ ಸಡಿಲಿಕೆಯನ್ನು ನೀಡಲಾಗಿದೆ.**

## 4. ಅರ್ಜಿ ಶುಲ್ಕ :

| | |
|---|---|
| ಸಾಮಾನ್ಯ ಮತ್ತು ಇತರೆ ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. | ರೂ.1,000/– + ಗೇಟ್ ವೇ ಶುಲ್ಕ (ಇದ್ದಲ್ಲಿ) |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಹಾಗೂ ವಿಕಲಚೇತನ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ. | ರೂ.500/– + ಗೇಟ್ ವೇ ಶುಲ್ಕ (ಇದ್ದಲ್ಲಿ) |

1. ಅರ್ಜಿ ಹಾಗೂ ಶುಲ್ಕ ಪಾವತಿಸಲು ಪ್ರಾರಂಭ ದಿನಾಂಕ 06.04.2026
2. ಅರ್ಜಿ ಹಾಗೂ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ **06.05.2026**
3. ಡಿ.ಡಿ. / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಹಾಗೂ ಇತರೆ ಮಾರ್ಗದೊಂದಿಗೆ ಶುಲ್ಕ ಪಾವತಿಸುವುದಕ್ಕೆ ಅವಕಾಶ ಇರುವುದಿಲ್ಲ.
4. ಪಾವತಿಸಿದ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.



For Bellary Dist.Central Co-Op Bank Ltd., Hospet

Chief Executive Officer

## 5. ಆಯ್ಕೆ ವಿಧಾನ :

### (ಅ) ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು :

1. ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರ ಖಾಲಿ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

2. ಆನ್‌ಲೈನ್ ಮುಖಾಂತರ ಸ್ವೀಕರಿಸಲಾದ ಅರ್ಜಿಗಳನ್ನು, ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ಸರ್ಕಾರವು ಸೂಚಿಸಲಾಗಿರುವ ಬಾಹ್ಯ ಮೂಲ ಸಂಸ್ಥೆಗಳಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು. ಹುದ್ದೆಗಳಿಗೆ ನಿಗದಿಪಡಿಸಿದ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು **1 : 5** ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. **15** ಅಂಕಗಳು ಸಂದರ್ಶನಕ್ಕೆ ನಿಗದಿಪಡಿಸಿದೆ.

3. ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರ ನೇರ ನೇಮಕಾತಿಗೆ ಸಂಬಂಧಿಸಿದಂತೆ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಶೇಕಡ **85** ಕ್ಕಿಳಿಸಿ ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟು ಕೂಡಿಸಿ ಅಂತಿಮ ಅರ್ಹತಾ ಪಟ್ಟಿಯನ್ನು (Merit List) ತಯಾರಿಸಿ, ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

4. ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ನಡೆಸುವ ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ **200** ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | | |
|---|---|---|
| 1 | ಕನ್ನಡ ಭಾಷೆಗೆ | 50 ಅಂಕಗಳು |
| 2 | ಸಾಮಾನ್ಯ ಇಂಗ್ಲೀಷ್ ಭಾಷೆಗೆ | 25 ಅಂಕಗಳು |
| 3 | ಸಾಮಾನ್ಯ ಜ್ಞಾನಕ್ಕೆ | 25 ಅಂಕಗಳು |
| 4 | ಸಹಕಾರ ವಿಷಯಕ್ಕೆ | 50 ಅಂಕಗಳು |
| 5 | ಭಾರತದ ಸಂವಿಧಾನಕ್ಕೆ | 25 ಅಂಕಗಳು |
| 6 | ಬ್ಯಾಂಕಿಂಗ್, ಸಮಾಜಯುಕ್ತವಾದ ಚಟುವಟಿಕೆ ಮತ್ತು ವಸ್ತು ನಿಷ್ಠೆ ವಿಷಯ. | 25 ಅಂಕಗಳು |
| | ಒಟ್ಟು | **200 ಅಂಕಗಳು** |

### (ಆ) ದ್ವಿತೀಯ ದರ್ಜೆ ಸಹಾಯಕರು :

1. ದ್ವಿತೀಯ ದರ್ಜೆ ಸಹಾಯಕರ ಖಾಲಿ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನ ಮೂಲಕ ಈ ಕೆಳಗಿನ ವಿಧಾನದನ್ವಯ ಆಯ್ಕೆ ಮಾಡಲಾಗುವುದು.

2. ಆನ್‌ಲೈನ್ ಮುಖಾಂತರ ಸ್ವೀಕರಿಸಲಾದ ಅರ್ಜಿಗಳನ್ನು ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ಸರ್ಕಾರವು ಸೂಚಿಸಲಾಗಿರುವ ಬಾಹ್ಯ ಮೂಲ ಸಂಸ್ಥೆಯಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು. ಹುದ್ದೆಗೆ ನಿಗದಿಪಡಿಸಿದ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು **1 : 5** ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. **15** ಅಂಕಗಳು ಸಂದರ್ಶನಕ್ಕೆ ನಿಗದಿಪಡಿಸಿದೆ.

3. ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಶೇಕಡ **85** ಕ್ಕಿಳಿಸಿ ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟು ಕೂಡಿಸಿ ಅಂತಿಮ ಅರ್ಹತಾ ಪಟ್ಟಿಯನ್ನು (Merit List) ತಯಾರಿಸಿ, ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

For Bellary Dist.Central Co-Op Bank Ltd.,Hospet

Chief Executive Officer

4. ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನಡೆಸುವ ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ **200** ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | | |
|---|---|---|
| 1 | ಕನ್ನಡ ಭಾಷೆಗೆ | 50 ಅಂಕಗಳು |
| 2 | ಸಾಮಾನ್ಯ ಇಂಗ್ಲೀಷ್ ಭಾಷೆಗೆ | 25 ಅಂಕಗಳು |
| 3 | ಸಾಮಾನ್ಯ ಜ್ಞಾನಕ್ಕೆ | 25 ಅಂಕಗಳು |
| 4 | ಸಹಕಾರ ವಿಷಯಕ್ಕೆ | 50 ಅಂಕಗಳು |
| 5 | ಭಾರತದ ಸಂವಿಧಾನಕ್ಕೆ | 25 ಅಂಕಗಳು |
| 6 | ಬ್ಯಾಂಕಿಂಗ್, ಸಮಾಜಯುಕ್ತವಾದ ಚಟುವಟಿಕೆ ಮತ್ತು ವಸ್ತು ನಿಷ್ಠ ವಿಷಯ. | 25 ಅಂಕಗಳು |
| | ಒಟ್ಟು | **200** ಅಂಕಗಳು |

## (ಇ) ವಾಹನ ಚಾಲಕರು :

1. ವಾಹನ ಚಾಲಕರ ಖಾಲಿ ಹುದ್ದೆಯನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನ ಮೂಲಕ ಈ ಕೆಳಗಿನ ವಿಧಾನಗಳನ್ವಯ ಆಯ್ಕೆ ಮಾಡಲಾಗುವುದು.

2. **ಆನ್‌ಲೈನ್ ಮುಖಾಂತರ ಸ್ವೀಕರಿಸಲಾದ ಅರ್ಜಿಗಳನ್ನು ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ** ಸರ್ಕಾರವು ಸೂಚಿಸಲಾಗಿರುವ ಬಾಹ್ಯ ಮೂಲ ಸಂಸ್ಥೆಯಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು. ಹುದ್ದೆಗೆ ನಿಗದಿಪಡಿಸಿದ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು **1 : 5** ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. **15** ಅಂಕಗಳು ಸಂದರ್ಶನಕ್ಕೆ ನಿಗದಿಪಡಿಸಿದೆ.

3. ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಶೇಕಡ **85 ಕ್ಕಿಳಿಸಿ,** ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟುಗೂಡಿಸಿ ಅರ್ಹತಾ ಪಟ್ಟಿಯನ್ನು ತಯಾರಿಸಿ (Merit List) ಮೀಸಲಾತಿ ನಿಯಮಗಳನ್ನು ಅನುಸರಿಸಿ, ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

4. ವಾಹನ ಚಾಲಕರ ಹುದ್ದೆಗೆ ನಡೆಸುವ ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ **100** ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | | |
|---|---|---|
| 1 | ಕನ್ನಡ ಭಾಷೆಗೆ | 50 ಅಂಕಗಳು |
| 2 | ಸಾಮಾನ್ಯ ಜ್ಞಾನಕ್ಕೆ | 50 ಅಂಕಗಳು |
| | ಒಟ್ಟು | 100 ಅಂಕಗಳು |

## (ಈ ) ಕಿರಿಯ ಸೇವಕರು :

1. ಕಿರಿಯ ಸೇವಕರ ಖಾಲಿ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನ ಮೂಲಕ ಈ ಕೆಳಗಿನ ವಿಧಾನಗಳನ್ವಯ ಆಯ್ಕೆ ಮಾಡಲಾಗುವುದು.

2. **ಆನ್‌ಲೈನ್ ಮುಖಾಂತರ ಸ್ವೀಕರಿಸಲಾದ ಅರ್ಜಿಗಳನ್ನು ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ** ಸರ್ಕಾರವು ಸೂಚಿಸಲಾಗಿರುವ ಬಾಹ್ಯ ಮೂಲ ಸಂಸ್ಥೆಯಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು. ಹುದ್ದೆಗೆ ನಿಗದಿಪಡಿಸಿದ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಿ ಅದನ್ನು ಆಧರಿಸಿ ಅಭ್ಯರ್ಥಿಗಳನ್ನು **1 : 5** ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. **15** ಅಂಕಗಳು ಸಂದರ್ಶನಕ್ಕೆ ನಿಗದಿಪಡಿಸಿದೆ.

For Bellary Dist.Central Co-Op Bank Ltd.,Hos.

Chief Executive Officer

ಬಿ.ಡಿ.ಸಿ.ಸಿ. ಬ್ಯಾಂಕ್ ಲಿ. ರಿ.ನಂ. 5398 ಹೊಸಪೇಟೆ

3. ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಶೇಕಡ **85** ಕ್ಕಿಳಿಸಿ, ಪ್ರಾಪ್ತವಾಗುವ ಅಂಕಗಳ ಶೇಕಡಾವಾರು ಪ್ರಮಾಣದ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟುಗೂಡಿಸಿ ಅರ್ಹತಾ ಪಟ್ಟಿಯನ್ನು ತಯಾರಿಸಿ (Merit List) ಮೀಸಲಾತಿ ನಿಯಮಗಳನ್ನು ಅನುಸರಿಸಿ, ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು.

4. ಕಿರಿಯ ಸೇವಕರ ಹುದ್ದೆಗೆ ನಡೆಸುವ ಲಿಖಿತ ಪರೀಕ್ಷೆಯು ಈ ಕೆಳಗಿನ ವಿಷಯಗಳನ್ನೊಳಗೊಂಡ **100** ಅಂಕಗಳ ಒಂದು ಪ್ರಶ್ನೆ ಪತ್ರಿಕೆಯನ್ನು ಹೊಂದಿರುತ್ತದೆ.

| | | |
|---|---|---|
| 1 | ಕನ್ನಡ ಭಾಷೆಗೆ | 50 ಅಂಕಗಳು |
| 2 | ಸಾಮಾನ್ಯ ಜ್ಞಾನಕ್ಕೆ | 50 ಅಂಕಗಳು |
| | ಒಟ್ಟು | 100 ಅಂಕಗಳು |

## 6. ಸೂಚನೆಗಳು:

ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಅವರ ಮೀಸಲಾತಿ/ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ. ಹಾಗೂ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಹಾಜರುಪಡಿಸತಕ್ಕದ್ದು.

1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ ಎಲ್ಲಾ ವರ್ಷಗಳ / ಸೆಮಿಸ್ಟರ್‌ಗಳ ಅಂಕ ಪಟ್ಟಿಗಳು.
2) ಎಲ್ಲಾ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ / ಶಾಲಾ ವರ್ಗಾವಣೆ ಪ್ರಮಾಣ ಪತ್ರ **ಅಥವಾ** ಕ್ಯುಮ್ಯುಲೇಟಿವ್ ರೆಕಾರ್ಡ್ ಅದರ ಪ್ರತಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.
3) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರಿಜ್ಞಾನ ಅತ್ಯವಶ್ಯಕವಾಗಿರುತ್ತದೆ.
4) ಅರ್ಜಿದಾರರು ಪ್ರತಿಯೊಂದು ದಾಖಲಾತಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬೇಕು.
5) ಅರ್ಜಿದಾರರು ತಪ್ಪು ಮಾಹಿತಿ ನೀಡಿದ್ದಲ್ಲಿ ಅಥವಾ ಸಮರ್ಪಕ ಮಾಹಿತಿ ನೀಡದಿದ್ದಲ್ಲಿ ಅಂತಹ ಅರ್ಜಿಗಳು ತಿರಸ್ಕೃತವಾಗುತ್ತವೆ.
6) ಅನುಚ್ಛೇಧ 371(ಜೆ) ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ **ಅನುಬಂಧ 'ಎ'** ರ ನಮೂನೆಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ಪಡೆದು ಅರ್ಜಿಯೊಂದಿಗೆ ಆನ್‌ಲೈನ್ ಮೂಲಕ ಸಲ್ಲಿಸಬೇಕು. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.
7) **ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು "ನಮೂನೆ-ಡಿ"** ರಲ್ಲಿ ಮೀಸಲಾತಿ ಪ್ರಮಾಣ ಪತ್ರ, **ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು "ನಮೂನೆ-ಇ"** ರಲ್ಲಿ ಮೀಸಲಾತಿ ಪ್ರಮಾಣ ಪತ್ರ, **ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು "ನಮೂನೆ-ಎಫ್"** ರಲ್ಲಿ ಪಡೆದ ಮೀಸಲಾತಿ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡುವುದು. ಹಾಗೂ ಇನ್ನಿತರೆ ಮೀಸಲಾತಿ ಸೌಲಭ್ಯ ಪಡೆಯಲು ಇಚ್ಛಿಸುವವರು, ಸರ್ಕಾರ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ಪ್ರಾಧಿಕಾರದಿಂದ ದೃಢೀಕರಣ ಪತ್ರ ಪಡೆದು ಆನ್‌ಲೈನ್ ಮೂಲಕ ಸಲ್ಲಿಸಬೇಕು.
8) ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪದವಿಯ ಎಲ್ಲಾ ವರ್ಷ/ಸೆಮಿಸ್ಟರ್ ಅಂಕಪಟ್ಟಿಗಳ ಪ್ರತಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.
9) ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿ ಪ್ರತಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.
10) ವಾಹನ ಚಾಲಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮತ್ತು ಕಾನೂನುಬದ್ಧ ಡ್ರೈವಿಂಗ್ ಲೈಸೆನ್ಸ್ ಪ್ರತಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

For Bellary Dist.Central Co-Op Bank Ltd.,Hospet

Chief Executive Officer

11) ಕಿರಿಯ ಸೇವಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಂಕಪಟ್ಟಿಯ ಪ್ರತಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

12) ಅಭ್ಯರ್ಥಿಗಳು ಇತ್ತೀಚಿನ Passport ಅಳತೆಯ ಭಾವ ಚಿತ್ರವನ್ನು ಒಂದು ಹಾಳೆಯ ಮೇಲೆ ಇಟ್ಟು ಭಾವ ಚಿತ್ರದ ಕೆಳಗೆ ಸಹಿ ಕಪ್ಪು ಶಾಯಿಯ Sketch/Marker ಪೆನ್ನಿನಲ್ಲಿ ಸಹಿ ಮಾಡಿ ನಂತರ ಸ್ಕ್ಯಾನ್ ಮಾಡಿ ಅರ್ಜಿಯನ್ನು ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದೇ ಇರುವ ಮತ್ತು ಅಪೂರ್ಣವಾಗಿರುವ ಹಾಗೂ ಶುಲ್ಕ ಸಂದಾಯ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

13) ಅಭ್ಯರ್ಥಿಗಳು ಈಗಾಗಲೇ ಯಾವುದಾದರೂ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅಂತಹ ಸಂಸ್ಥೆಯ ಮುಖ್ಯಸ್ಥರಿಂದ ಪಡೆದ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರದ **(No Objection Certificate)** ಪ್ರತಿಯನ್ನು ಅನ್‌ಲೈನ್ ಮೂಲಕ ಸಲ್ಲಿಸಬೇಕು.

14) ಗ್ರಾಮೀಣ / ಮಾಜಿ ಸೈನಿಕ / ಕನ್ನಡ ಮಾಧ್ಯಮ / ವಿಕಲಚೇತನ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಅನ್‌ಲೈನ್ ಮೂಲಕ ಸಲ್ಲಿಸಬೇಕು.

15) ಗ್ರಾಮೀಣ ಕೋಟಾ ಅಡಿಯಲ್ಲಿ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಗೆ ಸೇರಿದ ಅಭ್ಯರ್ಥಿಗಳು ಕೆನೆ ಪದರಕ್ಕೆ **(ಮೇಲುಸ್ತರಕ್ಕೆ) (creamy layer)** ತಾವು ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರ ಸಲ್ಲಿಸಬೇಕು.

16) ಅಭ್ಯರ್ಥಿಗಳು ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರ ಮತ್ತು ಕಿರಿಯ ಸೇವಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಆಯಾ ಹುದ್ದೆಗಳಿಗೆ ಪ್ರತ್ಯೇಕ ಅರ್ಜಿ ಮತ್ತು ಪ್ರತ್ಯೇಕ ನಿಗದಿತ ಶುಲ್ಕವನ್ನು ಪಾವತಿಸತಕ್ಕದ್ದು.

17) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಯಾವುದೇ ಕಾರಣವನ್ನು ನೀಡದೇ ಮುಂದೂಡುವ, ರದ್ದುಗೊಳಿಸುವ ಮತ್ತು ನಿಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಸಮಿತಿ ಹೊಂದಿರುತ್ತದೆ.

18) ಅಭ್ಯರ್ಥಿಗಳು ಅರ್ಜಿಯನ್ನು ಅವಶ್ಯ ದಾಖಲಾತಿಗಳೊಂದಿಗೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಿದ ಬಳಿಕ ಅರ್ಜಿಯ ಪ್ರತಿಯನ್ನು ಡೌನ್‌ಲೋಡ್ ಮಾಡಿ ಇಟ್ಟುಕೊಳ್ಳತಕ್ಕದ್ದು.

19) ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಅರ್ಹರಾದಲ್ಲಿ ಸಂದರ್ಶನಕ್ಕೆ ಹಾಜರಾಗಲು ದಿನಾಂಕ, ಸ್ಥಳ, ಸಮಯ ಮತ್ತು ಇತ್ಯಾದಿಗಳ ಮಾಹಿತಿಯನ್ನು ಎಸ್.ಎಂ.ಎಸ್. **(SMS)** ಅಥವಾ ಈ–ಮೇಲ್ **(e-mail)** ಅಥವಾ **ಬ್ಯಾಂಕಿನ ವೆಬ್‌ಸೈಟ್ (Web-Site)** ಮೂಲಕ ತಿಳಿಸಲಾಗುವುದು.

20) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯ ಪರೀಕ್ಷಾರ್ಥ ಸೇವೆಯಲ್ಲಿರಬೇಕಾಗುತ್ತದೆ.

21) ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕಿನಿಂದ ಸೂಚಿಸಲ್ಪಟ್ಟಂತೆ ಭದ್ರತಾ ಠೇವಣಿ ಹಾಗೂ ವೈಯಕ್ತಿಕ ಭದ್ರತೆ ನೀಡಬೇಕಾಗುತ್ತದೆ.

22) ಬ್ಯಾಂಕಿನ ಸೇವೆಗೆ ಆಯ್ಕೆಗೊಳ್ಳುವ ಅಭ್ಯರ್ಥಿಗಳು ಕರಾರು ಪತ್ರ ಹಾಗೂ ನಿಗದಿಪಡಿಸಿದ ಭದ್ರತಾ ಠೇವಣಿಯನ್ನು ಪಾವತಿಸಲು ಬದ್ಧರಿರತಕ್ಕದ್ದು.

23) ವ್ಯವಸ್ಥಾಪಕರು / ಪ್ರಥಮ ದರ್ಜೆ ಸಹಾಯಕರು ಹಾಗೂ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಲಿಖಿತ ಪರೀಕ್ಷೆಗಾಗಿ ಒಟ್ಟು **200** ಅಂಕಗಳಿಗೆ ನಿಗದಿಪಡಿಸಲಾಗಿದ್ದು, ಪರೀಕ್ಷಾ ಅವಧಿ **02** ಗಂಟೆ ಇರುತ್ತದೆ. ಪ್ರತಿಯೊಂದು ಪ್ರಶ್ನೆಗೆ **01** ಅಂಕಗಳು ಒಳಗೊಂಡಿರುತ್ತವೆ.

24) ವಾಹನ ಚಾಲಕರ ಮತ್ತು ಕಿರಿಯ ಸೇವಕರ ಹುದ್ದೆಗಳಿಗೆ ಲಿಖಿತ ಪರೀಕ್ಷೆಗಾಗಿ ಒಟ್ಟು **100** ಅಂಕಗಳಿಗೆ ನಿಗದಿಪಡಿಸಲಾಗಿದ್ದು, ಪರೀಕ್ಷಾ ಅವಧಿ **01** ಗಂಟೆ ಇರುತ್ತದೆ. ಪ್ರತಿಯೊಂದು ಪ್ರಶ್ನೆಗೆ **01** ಅಂಕಗಳು ಒಳಗೊಂಡಿರುತ್ತವೆ.

25) ಪ್ರಶ್ನೆ ಪತ್ರಿಕೆಯು ವಸ್ತು ನಿಷ್ಠಾ ಬಹು ಆಯ್ಕೆ ಮಾದರಿಯಲ್ಲಿರುತ್ತದೆ.

26) ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿರುತ್ತದೆ. (ಕನ್ನಡ ಭಾಷೆ ಮತ್ತು ಸಾಮಾನ್ಯ ಇಂಗ್ಲೀಷ್ ಭಾಷೆ ಹೊರತುಪಡಿಸಿ)

27) ಅಭ್ಯರ್ಥಿಗಳು ವಿವಿಧ ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಪಡೆದು ಒಂದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕ ಪಡೆದಲ್ಲಿ ಸಂದರ್ಶನಕ್ಕೆ ಹಾಜರಾಗಲು ಕರ್ನಾಟಕ ರಾಜ್ಯ ಸರ್ಕಾರದ ನೇಮಕಾತಿ ನಿಯಮಾವಳಿ ಪ್ರಕಾರ ಹೆಚ್ಚಿನ ವಯಸ್ಸಿನ ಅಭ್ಯರ್ಥಿಗೆ ಆದ್ಯತೆ ನೀಡಲಾಗುವುದು.

For Bellary Dist.Central Co-Op Bank Ltd.,Hospet

Chief Executive Officer

28) ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದು ಭಾವಿಸತಕ್ಕದ್ದಲ್ಲ. ತದ ನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು. ಹಾಗೂ ಯಾವುದೇ ಹಂತದಲ್ಲಾಗಲಿ ನ್ಯೂನತೆಗಳು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

29) ಬ್ಯಾಂಕು ಲಿಖಿತ ಪರೀಕ್ಷೆ ಮತ್ತು ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ಕಳುಹಿಸಲಾಗುವುದಿಲ್ಲ. ಬ್ಯಾಂಕಿನ ಅಂತರ್ ಜಾಲದಿಂದ ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಎಸ್.ಎಂ.ಎಸ್. ಮತ್ತು ಇ-ಮೇಲ್ ಮುಖಾಂತರ ತಿಳಿಸಲಾಗುವುದು.

30) ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್‌ಲೈನ್‌ನಲ್ಲಿ ನೀಡಿರುವ ಪ್ರಕಟಣೆಯನ್ವಯ ಭರ್ತಿ ಮಾಡತಕ್ಕದ್ದು. ಒಂದು ವೇಳೆ ತಪ್ಪು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಬ್ಯಾಂಕು ಕಾನೂನಿನನ್ವಯ ನೇಮಕಾತಿಯ ಯಾವ ಹಂತದಲ್ಲಿಯಾದರೂ ಅರ್ಜಿಯನ್ನು ತಿರಸ್ಕರಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

31) ಯಾವುದೇ ಸಂದರ್ಭದಲ್ಲಿ ಬ್ಯಾಂಕಿನ ಆಡಳಿತ ಮಂಡಳಿ / ಸಿಬ್ಬಂದಿ ನೇಮಕಾತಿ ಸಮಿತಿ ಕೈಗೊಳ್ಳುವ ನಿರ್ಣಯವು ಅಂತಿಮವಾಗಿರುತ್ತದೆ. ಮತ್ತು ಕಾಲ ಕಾಲಕಾಲಕ್ಕೆ ಅವಶ್ಯಕತೆಗನುಗುಣವಾಗಿ ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳಲು ಬ್ಯಾಂಕಿನ **ಆಡಳಿತ ಮಂಡಳಿ / ಸಿಬ್ಬಂದಿ ನೇಮಕಾತಿ ಸಮಿತಿಯು** ಅಧಿಕಾರ ಹೊಂದಿರುತ್ತದೆ.

32) ಮೀಸಲಾತಿ ಮತ್ತು ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಅಧಿಸೂಚನೆಯಲ್ಲಿ ತಿಳಿಸಿದ ಪ್ರಮಾಣ ಪತ್ರಗಳನ್ನು ಮತ್ತು ಅಂಕಪಟ್ಟಿಗಳನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಒಳಗಡೆ ಇರುವಂತೆ ದಾಖಲೆಗಳನ್ನು ಅಪ್‌ಲೋಡ್ ಮಾಡತತಕ್ಕದ್ದು. ಸಂದರ್ಶನ ಸಮಯದಲ್ಲಿ ಅಪ್‌ಲೋಡ್ ಮಾಡಿದ ಎಲ್ಲಾ ಮೂಲ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.

33) ಮಾಜಿ ಸೈನಿಕರು, ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರ್ಯಾಚ್ಯುಟಿ ಪ್ರಮಾಣ ಪತ್ರ / ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ **ಅಥವಾ** ಶಾಶ್ವತವಾಗಿ ಅಂಗವಿಕಲಗೊಂಡಿರುವ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

34) ಅಭ್ಯರ್ಥಿಗಳು ಅಂಕ ಪಟ್ಟಿ ಮತ್ತು ಇತರೆ ಅರ್ಹ ದಾಖಲಾತಿಗಳನ್ನು **ಸ್ವಯಂ ದೃಢೀಕರಣದೊಂದಿಗೆ** ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

35) ಆಯ್ಕೆಯಾದ ಅಭ್ಯರ್ಥಿಗಳು ಸಲ್ಲಿಸಿರುವ ವಿದ್ಯಾರ್ಹತೆ / ಮೀಸಲಾತಿ ದಾಖಲೆಗಳ ನೈಜತೆಯ ಬಗ್ಗೆ ಖಾತರಿಪಡಿಸಿಕೊಳ್ಳಲು ಸಂಬಂಧಪಟ್ಟ ಸಂಸ್ಥೆ / ಪ್ರಾಧಿಕಾರ / ವಿಶ್ವ ವಿದ್ಯಾಲಯದಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ. ಸಲ್ಲಿಸಿರುವ ದಾಖಲೆಗಳು ಸುಳ್ಳು / ನಕಲು / ಖೊಟ್ಟಾ ಎಂದು ಕಂಡು ಬಂದಲ್ಲಿ ಯಾವುದೇ ಕಾರಣ ನೀಡದೇ ಯಾವುದೇ ಹಂತದಲ್ಲಿ ಅಂತಹವರನ್ನು ನೇಮಕಾತಿಯಿಂದ ವಜಾಗೊಳಿಸಲಾಗುವುದು.

## 7. ಅರ್ಜಿ ಸಲ್ಲಿಸುವ ವಿಧಾನ :

**ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

**ಹಂತ 1 :-** ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ **https://**www.bellarydcc.bank.in ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'BDCC RECRUITMENT 2026'** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ **ಅಧಿಸೂಚನೆ ಮತ್ತು ಸೂಚನೆಗಳನ್ನು** ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅದರಂತೆ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಅರ್ಜಿ ನೊಂದಣಿ ಬಾಕ್ಸ್‌ನ್ನು ಒತ್ತಿ ನಂತರ ಅಧಿಸೂಚನೆ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಸ್ವೀಕೃತಿ ಚೆಕ್ ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು ನೊಂದಣಿ ಮುಂದುವರಿಸಿ ಗುಂಡಿಯನ್ನು ಒತ್ತಿ ಮುಂದುವರಿಯುವುದು.

**ಹಂತ 2 :-** ಅಭ್ಯರ್ಥಿಗಳು **http://** www.bellarydcc.bank.in ನ್ನು ತೆರೆದ ನಂತರ ನೊಂದಣಿ ಮಾಡಿಕೊಳ್ಳಲು ಹಾಗೂ ಲಾಗಿನ್ ರುಜುವಾತುಗಳಿಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ ಹೆಸರು, ಜನ್ಮ ದಿನಾಂಕ ವಿಕಲಚೇತನ ಮತ್ತು ವಿಧವೆಗೆ ಸಂಬಂಧಿಸಿದಂತೆ ಅನ್ವಯವಾಗುವ ಮೀಸಲಾತಿಯನ್ನು ಕ್ಲಿಕ್ಕಿಸಿ, ಮೊಬೈಲ್ ನಂಬರ್ ಮತ್ತು ಇ-ಮೇಲ್ ನೀಡಿ Get OTP ಗುಂಡಿಯನ್ನು ಒತ್ತಿದಾಗ ನೀವು ನೀಡಿದ ಮೊಬೈಲ್ ನಂಬರ್ ಮತ್ತು ಇ-ಮೇಲ್‌ಗೆ ಬಂದ OTP ಅನ್ನು ಹಾಕಿ Register ಮಾಡಿಕೊಳ್ಳತಕ್ಕದ್ದು. For Bellary Dist.Central Co-Op Bank Ltd.



Chief Executive Officer

ಬ.ಡಿ.ಸಿ.ಸಿ. ಬ್ಯಾಂಕ್ ರಿ.ನಂ. 5398


ಹಂತ 3 :- ನಿಮ್ಮ ನೋಂದಣಿ ಸಂಖ್ಯೆ, ಹುಟ್ಟಿದ ದಿನಾಂಕ ನಮೂದಿಸುವ ಮೂಲಕ ಲಾಗಿನ್ (Login) ಆಗಿ ಅಭ್ಯರ್ಥಿಗಳ ವಿವರದ ಎಲ್ಲಾ ಮಾಹಿತಿಯನ್ನು ಮತ್ತು ವಿದ್ಯಾರ್ಹತೆಯ ಮಾಹಿತಿಯನ್ನು ನಮೂದಿಸಿದ ನಂತರ Proceed ಗುಂಡಿ ಒತ್ತಿದಾಗ ನಿಮ್ಮ ಅರ್ಜಿಯಲ್ಲಿನ ವಿವರಗಳ ಬದಲಾವಣೆ ಅಗತ್ಯವಿದ್ದರೆ Edit ಗುಂಡಿಯಲ್ಲಿ ಒತ್ತಿ ಅರ್ಜಿಯಲ್ಲಿನ ವಿವರಗಳನ್ನು ಸರಿಪಡಿಸಿ ಸರಿ ಇರುವ ಬಗ್ಗೆ Preview ನಲ್ಲಿ ಖಚಿತಪಡಿಸಿಕೊಂಡು ನಂತರ ಅರ್ಜಿಗೆ ಸಂಬಂಧಿಸಿದ ಎಲ್ಲಾ ವಿವರಗಳ ಬಗ್ಗೆ ಸ್ವಯಂ ಘೋಷಣೆಯ ಚೆಕ್ ಬಾಕ್ಸ್‌ನ್ನು ಒತ್ತಿ Submit ಮಾಡತಕ್ಕದ್ದು. ಒಮ್ಮೆ Submit ಮಾಡಿದ ನಂತರ ಅರ್ಜಿಯಲ್ಲಿನ ಯಾವುದೇ ಮಾಹಿತಿ ಬದಲಾವಣೆಗೆ ಅವಕಾಶವಿರುವುದಿಲ್ಲ.

ಹಂತ 4 :- ಅಭ್ಯರ್ಥಿಯು **Photo & Signature Upload** ಗುಂಡಿಯನ್ನು ಒತ್ತಿ ಅವರ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ನಂತರ ನೀವು ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮತ್ತು ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳು ಹಾಗೂ ಹುದ್ದೆಗೆ ಸಂಬಂಧಿಸಿದ ಅಂಕಪಟ್ಟಿಗಳನ್ನು **ಸ್ವಯಂ ದೃಢೀಕರಣದೊಂದಿಗೆ** ಕಡ್ಡಾಯವಾಗಿ ಅಪ್‌ಲೋಡ್ ಮಾಡಿದ ನಂತರ Submit ಮಾಡತಕ್ಕದ್ದು.

ಹಂತ 5 :- ಅರ್ಜಿಯನ್ನು ಭರ್ತಿ ಮಾಡಿದ ನಂತರ ಅರ್ಜಿ ಶುಲ್ಕ ಹಾಗೂ ಅನ್ವಯಿಸುವ ಗೇಟ್ ವೇ ಶುಲ್ಕವನ್ನು **Payment Gate Way** ಲಿಂಕ್ ಬಳಸಿ ಪಾವತಿಸತಕ್ಕದ್ದು.

- ಅರ್ಜಿ ಶುಲ್ಕವನ್ನು **Net Banking, Credit Card, Debit Card, UPI or Google Pay** ಮುಖಾಂತರ ಪಾವತಿಸತಕ್ಕದ್ದು.
- **ಅರ್ಜಿ ಶುಲ್ಕವನ್ನು ನಿಗದಿಪಡಿಸಿದ ಕೊನೆಯ ದಿನಾಂಕ 06.05.2026 ರ ರಾತ್ರಿ 11.59 ರೊಳಗಾಗಿ ಪಾವತಿಸತಕ್ಕದ್ದು.**
- **ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.**
- ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಷೆ/ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.

| | |
|---|---|
| ಕಡತ ಗಾತ್ರ<100ಕೆ.ಬಿ | ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ |
| ಡಿಪಿಐ ಸೆಟ್ಟಿಂಗ್ =100 ಡಿಪಿಐ |  |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |



For Bellary Dist.Central Co-Op Bank Ltd.,Hospet
Chief Executive Officer

ಸೂಚನೆ :

ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಕಛೇರಿ ಕೆಲಸದ ದಿನಗಳಂದು ಬೆಳಿಗ್ಗೆ **10.30** ರಿಂದ ಸಂಜೆ **5.00** ಗಂಟೆಯವರೆಗೆ ಈ ಕೆಳಕಂಡ ಸಹಾಯವಾಣಿ ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆಯಬಹುದು.

1). **Help Line No. 98804 21742**

2) ಇ-ಮೇಲ್: **bdcc@gmail.com**

3) **Help Line No. 91872 35482**

## 8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:

### ಜಾತಿ ಮೀಸಲಾತಿ ಕೋರ ಬಯಸುವ ಅಭ್ಯರ್ಥಿ:

- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು **ನಮೂನೆ 'ಡಿ'** ರಲ್ಲಿ
- ಪ್ರವರ್ಗ – 1 ರ ಅಭ್ಯರ್ಥಿಗಳು **ನಮೂನೆ 'ಇ'** ನಲ್ಲಿ ಹಾಗೂ
- **2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್'** ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು, ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅಂದರೆ, ಹಿಂದುಳಿದ ವರ್ಗಗಳ ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು **05** ವರ್ಷ ಚಾಲ್ತಿಯಲ್ಲಿರುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಚಾಲ್ತಿಯಲ್ಲಿರಬೇಕು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಕೊನೆಯಲ್ಲಿ ನೀಡಲಾಗಿರುತ್ತದೆ).

## 9) ಗ್ರಾಮೀಣ ಅಭ್ಯರ್ಥಿ :

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ **1** ರಿಂದ **10** ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.
- ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು **ನಮೂನೆ 2** ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು **ನಮೂನೆ–2** ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ **ನಮೂನೆ–1** ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

For Bellary Dist.Central Co-Op Bank Ltd.

Chief Executive Officer

ಬಿ.ಡಿ.ಸಿ.ಸಿ. ಬ್ಯಾಂಕ್ ರಿ.ನಂ. 5398 ಹೊಸಪೇಟೆ

- ಸೂಚನೆ : ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ **ನಮೂನೆ-2** ರ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. (ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಕೊನೆಯಲ್ಲಿ ನೀಡಲಾಗಿರುತ್ತದೆ).

## 10) ಕನ್ನಡ ಮಾಧ್ಯಮ ಅಭ್ಯರ್ಥಿ :

- ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ **1 ನೇ ತರಗತಿಯಿಂದ 10** ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆ ಮುಖ್ಯೋಪಾಧ್ಯಾಯರ ಸಹಿ, ಜಾರಿ ದಿನಾಂಕ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ)

## 11) ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ :

- ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ). ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ)

## 12) ಮಾಜಿ ಸೈನಿಕರು :

- ➢ ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಜರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ)
- ➢ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭನುಸಾರ ಹೆಂಡತಿ ಅಥವಾ ಗಂಡ, ಮತ್ತು ಮಕ್ಕಳು, ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

  ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ



For Bellary Dist.Central Co-Op Bank Ltd.,Ho...

Chief Executive Officer

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಮತ್ತು ಅಸಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು

**ಅಥವಾ**

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

**ಅಥವಾ**

ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಮರ್ಥದ ಕಾರಣದಿಂದ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ ನಿರ್ಧಿಷ್ಠ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯೂಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಗಳು :–

1) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು

2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಮರ್ಥತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ :**

ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ಧಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕಾಗಿ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಬ್ಯಾಂಕಿನ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಮಾಜಿ ಸೈನಿಕರ ಅವಲಂಬಿತರು, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಮತ್ತು ಪರಿಶೀಲನೆಗೆ ಅರ್ಹರಾದಾಗ ಮೂಲ ದಾಖಲಾತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

## 13) ವಿಕಲಚೇತನ ಅಭ್ಯರ್ಥಿ :

ವಿಕಲಚೇತನರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ಸರ್ಕಾರದ ಅಧಿಸೂಚನೆಯನ್ವಯ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಗುರುತಿನ ಚೀಟಿ ಮತ್ತು ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ. ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನ್ಯತೆವುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು.

ವಿಕಲಚೇತನ ಅಭ್ಯರ್ಥಿಗಳು ಪರೀಕ್ಷೆ ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ, ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರತ್ಯೇಕ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು.

ಅರ್ಜಿಯಲ್ಲಿ ಲಿಪಿಕಾರರ ಸೇವೆಯನ್ನು ಒದಗಿಸುವಂತೆ ಕೋರಿದ್ದಲ್ಲಿ ಮಾತ್ರ ಅವಶ್ಯಕತೆ ಅನುಸಾರ ಲಿಪಿಕಾರರನ್ನು ಒದಗಿಸುವಂತೆ ಸಂಬಂಧಿತ ಪರೀಕ್ಷಾ ಕೇಂದ್ರದ ಮುಖ್ಯಸ್ಥರನ್ನು ಕೋರಲಾಗುವುದು.

For Bellary Dist.Central Co-Op Bank Ltd.,

Chief Executive Officer

## 14) ಅನುಚ್ಛೇದ 371(ಜೆ) ರಂತೆ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು **ಅನುಬಂಧ-'ಎ'** ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿರತಕ್ಕದ್ದು. ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

**ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, ದಿನಾಂಕ 06.05.2026 ರೊಳಗೆ ಪಡೆದಿರಬೇಕು. ಇಲ್ಲವೇ ಸಿಂಧುವಾಗಿರಬೇಕು, ಹಾಗೂ ಬ್ಯಾಂಕು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಮೂಲ ಪ್ರಮಾಣ ಪತ್ರಗಳ ಹಾಗೂ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.**

1. ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ; ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2. ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ; ಆ ಮೀಸಲಾತಿಯನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

## 15. ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ./ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ.)/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.

## 16. ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು.

1. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ :
   **ಟಿಪ್ಪಣಿ :** ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಅಧಿಕೃತ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಅಭ್ಯರ್ಥಿಗಳು ಅನ್ವಯವಾಗುವ ನಮೂನೆ **ಡಿ/ಇ/ಎಫ್** ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು ಹಾಗೂ ಸಿಂಧುವಾಗಿರಬೇಕು.

For Bellary Dist.Central Co-Op Bank Ltd.,Hospet

Chief Executive Officer

3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು (Circle) ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು **(No Objection Certificate)** ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಪಡೆದಿರತಕ್ಕದ್ದು.
4. ಕಲ್ಯಾಣ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣ ಪತ್ರ (ನಮೂನೆ – ಎ ರಲ್ಲಿ) ಸಲ್ಲಿಸತಕ್ಕದ್ದು.
5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ – 1 ಮತ್ತು ಸಾಮಾನ್ಯ ಅಭ್ಯರ್ಥಿಗಳು ನಮೂನೆ-1 ಮತ್ತು 2 ರಲ್ಲಿ ಸಲ್ಲಿಸತಕ್ಕದ್ದು.
6. ವಿಕಲಚೇತನ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ವೈದ್ಯಕೀಯ ಮಂಡಳಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

## 17. ಪ್ರಮುಖ ಸೂಚನೆಗಳು :

1. ಅಭ್ಯರ್ಥಿಗಳು On-Line ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಅರ್ಹರೆ ಎಂಬುದನ್ನು ಬ್ಯಾಂಕು / ಬಾಹ್ಯ ಸಂಸ್ಥೆಯು ಪರಿಶೀಲಿಸಿ, ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆ/ಸಂದರ್ಶನ ಕರೆ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಪೂರ್ಣವಾಗಿರುವ, ಫೋಟೋ ಮತ್ತು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
5. **ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸುವ ವಿದ್ಯಾರ್ಹತೆಯ ಅಂಕಪಟ್ಟಿಗಳು, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳ ಪ್ರತಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು. ಅಸ್ಪಷ್ಟವಾದ ಅಥವಾ ಸರಿಯಾಗಿ ಕಾಣದ ಪ್ರಮಾಣ ಪತ್ರಗಳನ್ನು ಅಪ್‌ಲೋಡ್ ಮಾಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
6. **ಈ ನೇರ ನೇಮಕಾತಿ ಪ್ರಕಟಣೆಯ ಅವಧಿಯಲ್ಲಿ ಮೀಸಲಾತಿಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರ/ಘನ ನ್ಯಾಯಾಲಯದ ಒಳ ಮೀಸಲಾತಿಗೆ ಹೊರಡಿಸಬಹುದಾದ ನಿರ್ದೇಶನ ಮತ್ತು ಆದೇಶಗಳಿಗೆ ಒಳಪಟ್ಟಿರುತ್ತದೆ.**

## 18. ಲಿಖಿತ/ಸಂದರ್ಶನ ಕರೆ ಪತ್ರ :

ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಅರ್ಹವಿರುವ ಅಭ್ಯರ್ಥಿಗಳ ಪ್ರವೇಶ ಪತ್ರ / ಸಂದರ್ಶನ ಪತ್ರ ಹಾಗೂ ಲಿಖಿತ ಪರೀಕ್ಷೆ/ಸಂದರ್ಶನ ದಿನಾಂಕವನ್ನು ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ವೆಬ್‌ಸೈಟ್‌ನಲ್ಲಿ ಅಥವಾ ಎಸ್.ಎಂ.ಎಸ್. (SMS) ಅಥವಾ ಈ-ಮೇಲ್ (e-mail) ಮುಖಾಂತರ ತಿಳಿಸಲಾಗುವುದು. ಅರ್ಹರಾದವರು ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಗುರುತಿನ ಚೀಟಿಯೊಂದಿಗೆ (ಆಧಾರ್ ಪ್ರತಿ) ಲಿಖಿತ ಪರೀಕ್ಷೆಗೆ/ಸಂದರ್ಶನಕ್ಕೆ ಹಾಜರಾಗುವುದು. **ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ವಿಳಾಸ, ಮೊಬೈಲ್ ನಂಬರ್ ಹಾಗೂ ಇ-ಮೇಲ್ ವಿವರಗಳು ಅಂತಿಮವಾಗಿರುತ್ತದೆ. ನಂತರ ಬದಲಾವಣೆಯಾದಲ್ಲಿ ಪರಿಗಣಿಸುವುದಿಲ್ಲ.**

## 19. ಬ್ಯಾಂಕ್‌ನೊಂದಿಗೆ ಪತ್ರ ವ್ಯವಹಾರ :

ಬ್ಯಾಂಕಿನ ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಅವಕಾಶವಿರುವುದಿಲ್ಲ.

## 20. ದುರ್ನಡತೆ :

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ಬ್ಯಾಂಕ್‌ನಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಬ್ಯಾಂಕ್ ನೇಮಕಾತಿ ಮಾಡುವ ಯಾವುದೇ ಹುದ್ದೆಯ ಸಂದರ್ಶನ / ಆಯ್ಕೆಯಿಂದ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

## 21. ನಿರ್ಬಂಧ :

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ,
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ,
3. ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
4. ಭಾರತ ದೇಶದ ಸಾರ್ವಭೌಮ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಛಾಟನೆಗೊಂಡಿದ್ದಲ್ಲಿ,
6. ವ್ಯಕ್ತಿಯು ನ್ಯಾಯಬಾಹಿರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.
7. ಭಾರತದ ಪ್ರಜೆ ಅಲ್ಲದಿದ್ದರೆ.
8. ಮಾನಸಿಕ ಅಸ್ವಸ್ಥತೆ / ಖಿನ್ನತೆಗೆ ಒಳಗಾಗಿದ್ದರೆ.

For Bellary Dist.Central Co-Op Bank Ltd.,Hospet

Chief Executive Officer

ಸಂಚಾಲಕ ಸದಸ್ಯರು, ಸಿಬ್ಬಂದಿ ನೇಮಕಾತಿ ಸಮಿತಿ,
ಹಾಗೂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ
ಬಿ.ಡಿ.ಸಿ.ಸಿ. ಬ್ಯಾಂಕ್ ನಿ., ಹೊಸಪೇಟೆ.

<u>ಅನುಬಂಧ</u>

(ಪ.ಜಾ, / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ

(ನಿಯಮ 3ಎ (2) (3) ನೋಡಿ)

## ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.

## ಪ್ರಮಾಣ ಪತ್ರ

1) ........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ............................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಪರಿಶಿಷ್ಟ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..............................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ................................................................ ಜಿಲ್ಲಾ/ವಿಭಾಗದ ..........................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.........................................................

ತಹಶೀಲ್ದಾರ್..........................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ಡಿ.ಸಿ.ಸಿ. ಬ್ಯಾಂಕ್ ನಿ. ನಂ. 5398

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

________________________________ ಗ್ರಾಮ / ಪಟ್ಟಣದ / ನಗರ ________________________________ ಇವರ

ನಿವಾಸಿಯಾದ ಶ್ರೀ / ಶ್ರೀಮತಿ ________________________________

ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ________________________________ ಜಾತಿಯ

ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ________________________________

________________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ದಿನಾಂಕ :

ತಹಶೀಲ್ದಾರ್

ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

____________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ __________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ________________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್.ಡಬ್ಲ್ಯೂ.ಡಿ. 225 ಬಿ.ಸಿ.ಎ. 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (**ಕ್ರೀಮಿ ಲೇಯರ್**) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2 ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

*ಅಥವಾ*

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

*ಅಥವಾ*

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

*ಅಥವಾ*

ಆತನ / ಅಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎಂಟು ಲಕ್ಷಮೀರುವುದಿಲ್ಲವೆಂದು;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಶ್ರೀ / ಶ್ರೀಮತಿ / ಕುಮಾರಿ______________ಇವರು ____________ ಜಾತಿಗೆ __________________ ಸೇರಿದ ಉಪಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ________________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ. ಮತ್ತು ಕುಟುಂಬದ ವಾರ್ಷಿಕ ಆದಾಯವು ರೂ. _______________ (ರೂಪಾಯಿ __________ ____________________________________________.) ಮಾತ್ರ ಎಂದು ಪ್ರಮಾಣೀಕರಿಸುತ್ತವೆ.

ಸ್ಥಳ : ____________________

**ತಹಶೀಲ್ದಾರ್**

ದಿನಾಂಕ : ______________ತಾಲ್ಲೂಕು

**ಕಛೇರಿಯ ಮೊಹರು**

**<u>ಸೂಚನೆ</u> : 1) ಸರ್ಕಾರದ ಆದೇಶ ದಿನಾಂಕ 14–09–2018 ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ–ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ.8.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ, ಮೀಸಲಾತಿ ಪ್ರಮಾಣ ಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ 14–09–2018 ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.**

**2) ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ / ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.**

# <u>ನಮೂನೆ – 1</u>

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
______________ತಾಲ್ಲೂಕು
______________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ______________________________ ಎಂಬುವವರ ಮಗ / ಮಗಳು / ಪತಿ / ಪತ್ನಿ ______________________________ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ :
   ಮಾಧ್ಯಮಿಕ :
   ಪ್ರೌಢ :
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

# ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ತಮ್ಮ ವಿಧೇಯ

ಸ್ಥಳ:

(ಅಭ್ಯರ್ಥಿಯ ಸಹಿ)

ದಿನಾಂಕ:

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ತಂದೆ/ತಾಯಿ/ಪೋಷಕರ ಸಹಿ

ಸ್ಥಳ:

**(ತಂದೆ/ತಾಯಿ ಜೀವಂತವಿಲ್ಲದಿದ್ದರೆ)**

**ದಿನಾಂಕ:**

(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ______________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ______________ ಎಂಬುವವರು ಕರ್ನಾಟಕ ರಾಜ್ಯದ ________ಜಿಲ್ಲೆಯ ವಿಭಾಗ ______________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ______________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ತಹಶೀಲ್ದಾರ್

ಸ್ಥಳ :

ದಿನಾಂಕ: ______________ತಾಲ್ಲೂಕು

**ಕಛೇರಿಯ ಮೊಹರು**

**ಸೂಚನೆ-1 :** ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ-2:** ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು



# ನಮೂನೆ – 2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ______________ ಜಿಲ್ಲೆ __________ ತಾಲ್ಲೂಕು_________ ಗ್ರಾಮದಲ್ಲಿ __________ ವಾಸವಾಗಿರುವ ಇವರು ಒಂದನೇ ತರಗತಿಯಿಂದ __________ ತರಗತಿಯವರೆಗೆ __________ ಜಿಲ್ಲೆ __________ ತಾಲ್ಲೂಕು________ ಪಟ್ಟಣ_______ ಶಾಲೆಯಲ್ಲಿ ವ್ಯಾಸಂಗ ಮಾಡಿ__________ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸಹಿ

ಮೇಲು ರುಜು

ಕ್ಷೇತ್ರ ಶಿಕ್ಷಣ ಅಧಿಕಾರಿ

ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ

ಮತ್ತು ಸಂಸ್ಥೆಯ ಮೊಹರು

ಸ್ಥಳ :

ದಿನಾಂಕ :

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ______________________ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ ಕುಮಾರಿ______________ ಜಿಲ್ಲೆ __________ ತಾಲೂಕು __________ ______________ ಗ್ರಾಮದಲ್ಲಿ ವಾಸವಾಗಿರುವ ಇವರು _______ ನೇ ತರಗತಿಯಿಂದ __________ ನೇ ತರಿಗತಿವರೆಗೆ __________ ಶೈಕ್ಷಣಿಕ ವರ್ಷದಿಂದ __________ ಶೈಕ್ಷಣಿಕ ವರ್ಷದವರೆಗೆ ______________________ ಶಾಲೆಯಲ್ಲಿ ಕನ್ನಡ ಮಾಧ್ಯಮಾದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ದಿನಾಂಕ:

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

# <u>ನಮೂನೆ – 3</u>

## <u>ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿ</u>

ಶ್ರೀ / ಶ್ರೀಮತಿ ________________________ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ____________________ ಜಿಲ್ಲೆ ______________ತಾಲೂಕು ___________ ____________________ ಗ್ರಾಮದಲ್ಲಿ ವಾಸವಾಗಿರುವ ಇವರು/ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ______________ ಯೋಜನೆಗಾಗಿ __________ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಲಾಗಿದೆ :

(ಅ) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು.

(ಆ) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೇ : ಯೋಜನೆಯಿಂದ ತಾವು ವಾಸಿಸುವ ಮನೆ :

(ಇ) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ.

(ಈ) ** ಇತರೆ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ :
**ದಿನಾಂಕ:**

**ತಹಶೀಲ್ದಾರ್**
**ತಾಲೂಕು / ಕಛೇರಿಯ ಮೊಹರು**

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum ....................................................... son / wife / daughter of Shri ....................................................... age ................. old, male / female, Registration No ................................ is a case of ........................................ He / She is physically disabled/visual disabled/speech & hearing disabled and has ......................... % (........................percent) permanent (physical impairment visual impairment speech & hearing impairment) in relation to his / her ................................

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of .................... months/years. *

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |
| (Orthopedic Surgeon) | (ENT Doctor) | (District Medical Surgoen) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

## ಅನುಬಂಧ – ಎ.

## ಅರ್ಹತಾ ಪ್ರಮಾಣ ಪತ್ರ

(ಅನುಚ್ಛೇದ 371(ಜೆ) ಮೇರೆಗೆ)

(3)(3)ನೇ ನಿಯಮ ನೋಡಿ)

(ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ)

(ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ/ಶ್ರೀಮತಿ________________________________ ರವರು ________________________________ ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ________________ ಜಿಲ್ಲೆಯ ________________ ತಾಲ್ಲೂಕಿನ ________________ ಗ್ರಾಮ/ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ:________________

ದಿನಾಂಕ:________________

ಹೆಸರು ________________

ಅಸಿಸ್ಟೆಂಟ್ ಕಮೀಷನರ್

________________ ಉಪ ವಿಭಾಗ

________________ ಜಿಲ್ಲೆ.

<u>GOVERNMENT OF KARNATAKA</u>

**Department of Sainik Welfare and Resettlement.**

Office of the Deputy Director,
Department of Sainik Welfare
And Resettlement (Karnataka)

No: ______________.    Date : ____________.

## : CERTIFICATE :

This is to certify that Sri/Smt/Kum. ............................................ is an applicant for certify .................................. is a spouse/son/dauther of No................ Rank .................... Name....................................... of Army/Navy/Air Force, who is annex-serviceman according to the definition laid down by the Ministry of Defence, Government of India, He served from ........................ To ..............................

The Ex-Serviceman had declared his home town in Karnataka at the time of entry into service as per records and hence eligible to avail reserved seat under Ex-Serviceman Home addess before joining Service.

.......................................................

.......................................................

Place :    Signature of Deputy Director

Date :    Department of Sainik Welfare of

Resettlement ......................... (Dist)

.......................................................OR ..............................................................

## : CERTIFICATE :

This is to certify that Sri/Smt/Kum. ............................................ is an applicant for .................................... is a spouse/son/daughter of No................ Rank .................. Name....................................... Who died / permanently disabled while in service according to the certificate issued by the Defence Authority. He died / disabled on ..................................

The home address of the Individual at the time of joining in Defence service as per records is as under :

.......................................................

.......................................................

.......................................................

Place :    Signature of Deputy Director

Date :    Department of Sainik Welfare of

Resettlement ......................... (Dist)